ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಡಿಟಿಇ 24 ಇಎಸ್‌ಟಿ 4 (ಬಿ)(3) 2018 /1508

ನಿರ್ದೇಶಕರವರ ಕಛೇರಿ
ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ
ಅರಮನೆ ರಸ್ತೆ, ಬೆಂಗಳೂರು-560001
ದಿನಾಂಕ: 09.08.2018

## ಸುತ್ತೋಲೆ

ವಿಷಯ: ಅನುದಾನಿತ ಶಿಕ್ಷಣ ಸಿಬ್ಬಂದಿಗಳು ನೇರವಾಗಿ ಸರ್ಕಾರ ಮತ್ತು ಸಚಿವರುಗಳಿಗೆ ಮನವಿಗಳನ್ನು ಸಲ್ಲಿಸುತ್ತಿರುವ ಬಗ್ಗೆ.

*-*-*-*-*

ತಾಂತ್ರಿಕ ಶಿಕ್ಷಣ ಇಲಾಖೆಯ ಅನುದಾನಿತ ಇಂಜಿನಿಯರಿಂಗ್ ಕಾಲೇಜು/ಪಾಲಿಟೆಕ್ನಿಕ್‌ಗಳ ಹಲವು ಸಿಬ್ಬಂದಿಗಳು ಸೌಲಭ್ಯಗಳ ಮಂಜೂರಾತಿ ಮತ್ತು ಇತರೆ ವಿಷಯಗಳ ಬಗ್ಗೆ ಸರ್ಕಾರಕ್ಕೆ ಮತ್ತು ಮಾನ್ಯ ಸಚಿವರುಗಳಿಗೆ ನೇರವಾಗಿ ಮನವಿ ಸಲ್ಲಿಸುತ್ತಿರುವುದು ಮತ್ತು ಶಿಫಾರಸ್ಸು ಪತ್ರಗಳನ್ನು ನೀಡುತ್ತಿರುವುದು ಕಂಡು ಬಂದಿರುತ್ತದೆ.

ಕರ್ನಾಟಕ ಸಿವಿಲ್ ಸೇವಾ (ನಡತೆ) ನಿಯಮಗಳು, 1966 ರ ನಿಯಮ 26 ರನ್ವಯ ಯಾರೇ ನೌಕರನು ಸರ್ಕಾರದ ಅಧೀನದಲ್ಲಿ **ತನ್ನ ಸೇವೆಗೆ ಸಂಬಂಧಿಸಿದ ವಿಷಯಗಳ ಸಂಬಂಧದಲ್ಲಿ** ಅವನ ಹಿತಾಸಕ್ತಿಗಳನ್ನು ಸಾಧಿಸಿಕೊಳ್ಳಲು **ಯಾರೇ ವರಿಷ್ಠ ಅಧಿಕಾರಿಯ ಮೇಲೆ ಯಾವುದೇ ರಾಜಕೀಯ ಅಥವಾ ಇತರ ಪ್ರಭಾವವನ್ನು ತರತಕ್ಕದ್ದಲ್ಲ ಅಥವಾ ತರಲು ಪ್ರಯತ್ನಿಸತಕ್ಕದ್ದಲ್ಲ** ಹಾಗೂ ನಿಯಮ 27 ರನ್ವಯ **ಸರ್ಕಾರಿ ನೌಕರನು ಯಾವುದೇ ಮನವಿಯನ್ನು ತನ್ನ ಮೇಲಧಿಕಾರಿಯ ಮೂಲಕ ಮಾತ್ರ ಸಲ್ಲಿಸತಕ್ಕದ್ದು**.

ಯಾವುದೇ ಅನುದಾನಿತ ಸಿಬ್ಬಂದಿಗಳು ಮೇಲ್ಕಂಡ ನಿಯಮಗಳನ್ನು ಪಾಲಿಸದಿದ್ದಲ್ಲಿ ಅದನ್ನು ಗಂಭೀರವಾಗಿ ಪರಿಗಣಿಸಿ, ಅಂತಹವರ ವಿರುದ್ಧ ಸಂಬಂಧಪಟ್ಟ ಅನುದಾನಿತ ಶಿಕ್ಷಣ ಸಂಸ್ಥೆಗಳ ಆಡಳಿತ ಮಂಡಳಿಗಳು ನಿಯಮಾನುಸಾರ ಶಿಸ್ತು ಕ್ರಮ ಕೈಗೊಳ್ಳತಕ್ಕದ್ದು.

ಮುಂದುವರೆದು, ಕೆಲವು ಅನುದಾನಿತ ಇಂಜಿನಿಯರಿಂಗ್ ಕಾಲೇಜು ಮತ್ತು ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ **ದೀರ್ಘಕಾಲ ಕರ್ತವ್ಯಕ್ಕೆ ಅನಧಿಕೃತ ಗೈರು ಹಾಜರಾಗುವ ಸಿಬ್ಬಂದಿಗಳ ವಿರುದ್ಧ ಯಾವುದೇ ಶಿಸ್ತುಕ್ರಮ ಜರುಗಿಸದೆ, ಕೇವಲ ಜ್ಞಾಪನಗಳನ್ನು ನೀಡುತ್ತಾ**, ಅಂತಹ ಸಿಬ್ಬಂದಿಗಳು ಪುನಃ ಕರ್ತವ್ಯಕ್ಕೆ ಹಾಜರಾದಲ್ಲಿ ಅಂತಹವರ ಅನಧಿಕೃತ ಗೈರು ಹಾಜರಿಯನ್ನು 'ವೇತನ ರಹಿತ ರಜೆಯೆಂದು' ಪರಿಗಣಿಸಿ ಕರ್ತವ್ಯಕ್ಕೆ ವರದಿ ಮಾಡಿಸಿಕೊಂಡಿರುವುದು ಕಂಡುಬಂದಿರುತ್ತದೆ.

ಆದರೆ ಕರ್ನಾಟಕ ನಾಗರಿಕ ಸೇವಾ ನಿಯಮಾವಳಿಯ ನಿಯಮ 106 (ಎ) ಮತ್ತು 108 ಗಳನ್ವಯ ಕರ್ತವ್ಯಕ್ಕೆ ಅನಧಿಕೃತ ಗೈರು ಹಾಜರಾಗುವ ನೌಕರರ ವಿರುದ್ಧ ಶಿಸ್ತುಕ್ರಮ ಕೈಗೊಳ್ಳಬೇಕಾಗಿರುತ್ತದೆ. ಆದುದರಿಂದ ಇನ್ನು ಮುಂದೆ ಕರ್ತವ್ಯಕ್ಕೆ ಅನಧಿಕೃತವಾಗಿ ಗೈರು ಹಾಜರಾಗುವ ಅನುದಾನಿತ ಸಿಬ್ಬಂದಿಗಳ ವಿರುದ್ಧ ನಿಯಮಾನುಸಾರ ಶಿಸ್ತುಕ್ರಮ ಕೈಗೊಳ್ಳತಕ್ಕದ್ದು.

ಮೇಲ್ಕಂಡ ಸೂಚನೆಗಳನ್ನು/ನಿಯಮಗಳನ್ನು ಎಲ್ಲಾ ಅನುದಾನಿತ ಇಂಜಿನಿಯರಿಂಗ್ **ಕಾಲೇಜು ಮತ್ತು** ಅನುದಾನಿತ ಪಾಲಿಟೆಕ್ನಿಕ್ ಸಂಸ್ಥೆಗಳ ಅನುದಾನಿತ ಸಿಬ್ಬಂದಿಗಳು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು, ಇಲ್ಲವಾದಲ್ಲಿ ಅಂತಹ ಸಿಬ್ಬಂದಿಗಳ ವಿರುದ್ಧ ಕೂಡಲೇ ನಿಯಮಾನುಸಾರ ಶಿಸ್ತುಕ್ರಮ ಕೈಗೊಳ್ಳಲು ಸಂಬಂಧಪಟ್ಟ **ಆಡಳಿತ** ಮಂಡಳಿಯ ಅಧ್ಯಕ್ಷರು/ಕಾರ್ಯದರ್ಶಿಗಳಿಗೆ ಈ ಮೂಲಕ ಸೂಚಿಸಲಾಗಿದೆ.

ಪುಟ ಸಂಖ್ಯೆ 02ರಲ್ಲಿ ಮುಂದುವರೆದಿದೆ.....

ಇದಲ್ಲದೆ, ಕೆಲವು ಅನುದಾನಿತ ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ಉಪನ್ಯಾಸಕರಿಗೆ ಪ್ರಾಂಶುಪಾಲರ ಹಂತದಲ್ಲಿಯೇ ಕೆರಿಯರ್ ಅಡ್ವಾನ್ಸ್‌ಮೆಂಟ್ ಯೋಜನೆಯಡಿಯಲ್ಲಿ ಎ.ಜಿ.ಪಿ. ಮಂಜೂರು ಮಾಡುತ್ತಿರುವುದು ಕಂಡು ಬಂದಿರುತ್ತದೆ.

ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್ ಸಂಸ್ಥೆಗಳ ಬೋಧಕ ವೃಂದದವರಿಗೆ ಕೆರಿಯರ್ ಅಡ್ವಾನ್ಸ್‌ಮೆಂಟ್ ಯೋಜನೆಯಡಿ ಸ್ಥಾನೀಕರಣ ಮುಂಬಡ್ತಿ ನೀಡಲು **ತಾಂತ್ರಿಕ ಶಿಕ್ಷಣ ನಿರ್ದೇಶಕರು ಮತ್ತು ವಿಷಯ ತಜ್ಞರುಗಳನ್ನೊಳಗೊಂಡ ಸ್ಥಾನೀಕರಣ ಆಯ್ಕೆ ಸಮಿತಿಯನ್ನು ರಚಿಸಲಾಗಿದ್ದು**, ಅದರಂತೆ ಕೆರಿಯರ್ ಅಡ್ವಾನ್ಸ್‌ಮೆಂಟ್ ಯೋಜನೆಯಡಿಯಲ್ಲಿ ಹಿರಿಯ/ಆಯ್ಕೆ ವೇತನ ಶ್ರೇಣಿ/ಎ.ಜಿ.ಪಿ. ಮಂಜೂರಾತಿಗೆ ಸಂಬಂಧಿಸಿದ ಎಲ್ಲಾ ಪ್ರಕರಣಗಳನ್ನು ಸದರಿ ಸ್ಥಾನೀಕರಣ ಆಯ್ಕೆ ಸಮಿತಿಯೆದುರು ಮಂಡಿಸಿ ಸಮಿತಿಯು ಅನುಮೋದನೆ ನೀಡಿದ ನಂತರ ಈ ಸೌಲಭ್ಯಗಳನ್ನು ಮಂಜೂರು ಮಾಡುವ ಬಗ್ಗೆ ಆದೇಶ ಹೊರಡಿಸಬೇಕಾಗಿರುತ್ತದೆ.

ಆದುದರಿಂದ ಬೋಧಕ ವೃಂದದವರಿಗೆ ಕೆರಿಯರ್ ಅಡ್ವಾನ್ಸ್‌ಮೆಂಟ್ ಯೋಜನೆಯಡಿ ಸ್ಥಾನೀಕರಣ ಮುಂಬಡ್ತಿ ಮಂಜೂರು ಮಾಡುವಂತಹ ಪ್ರಕರಣಗಳಲ್ಲಿ ಇನ್ನು ಮುಂದೆ ತಾಂತ್ರಿಕ ಶಿಕ್ಷಣ ನಿರ್ದೇಶನಾಲಯಕ್ಕೆ ಪ್ರಸ್ತಾವನೆ ಸಲ್ಲಿಸಿ ಮಂಜೂರಾತಿ ಪಡೆಯಲು ಈ ಮೂಲಕ ತಿಳಿಸಲಾಗಿದೆ.

ನಿರ್ದೇಶಕರು
ತಾಂತ್ರಿಕ ಶಿಕ್ಷಣ ಇಲಾಖೆ

ಇವರಿಗೆ:

1. ಎಲ್ಲಾ ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳು ಮತ್ತು ಪಾಲಿಟೆಕ್ನಿಕ್ ಸಂಸ್ಥೆಗಳ ಆಡಳಿತ ಮಂಡಳಿಯ ಅಧ್ಯಕ್ಷರು/ಕಾರ್ಯದರ್ಶಿಗಳು
2. ಎಲ್ಲಾ ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳು ಮತ್ತು ಪಾಲಿಟೆಕ್ನಿಕ್ ಸಂಸ್ಥೆಗಳ ಪ್ರಾಂಶುಪಾಲರುಗಳು (ಮಾಹಿತಿಗಾಗಿ ಹಾಗೂ ಸಂಸ್ಥೆಯ ಸೂಚನಾ ಫಲಕದಲ್ಲಿ ಪ್ರಕಟಿಸಲು).

ಪ್ರತಿ:

1. ನಿರ್ದೇಶಕರ ಆಪ್ತ ಶಾಖೆಗೆ.
2. ಇ-ಆಡಳಿತ ವಿಭಾಗಕ್ಕೆ (ಇಲಾಖಾ ಜಾಲತಾಣದಲ್ಲಿ ಪ್ರಕಟಿಸಲು).

*********